Akashvani: Bangalore
National Bulletin in Kannada
19.12.2025 : 13.10hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

19.12.2025 : 13.10hrs

******

**ಮುಖ್ಯಾಂಶಗಳು**

1. ಸಂಸತ್ತಿನ ಉಭಯ ಸದನಗಳ ಕಲಾಪ ಅನಿರ್ದಿಷ್ಟಾವಧಿಗೆ ಮುಂದೂಡಿಕೆ
2. ಹೈದರಾಬಾದ್‌ನಲ್ಲಿಂದು ರಾಜ್ಯ ಸಾರ್ವಜನಿಕ ಸೇವಾ ಆಯೋಗಗಳ ಅಧ್ಯಕ್ಷರ ರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಿದ ರಾಷ್ಟ್ರಪತಿ ದ್ರೌಪದಿ ಮುರ್ಮು
3. ಮೈ ಆಯುಷ್ ಇಂಟಿಗ್ರೇಟೆಡ್ ಸರ್ವೀಸಸ್ ಪೋರ್ಟಲ್‌ಗೆ ಇಂದು ಪ್ರಧಾನಿ ನರೇಂದ್ರ ಮೋದಿ ಚಾಲನೆ
4. ಟಿ-೨೦ ಕ್ರಿಕೆಟ್; ಸರಣಿಯ ಅಂತಿಮ ಪಂದ್ಯದಲ್ಲಿಂದು ಭಾರತ-ದಕ್ಷಿಣಾ ಆಫ್ರಿಕಾ ಮುಖಾಮುಖಿ

********

ಸಂಸತ್ತಿನ ಉಭಯ ಸದನಗಳನ್ನು ಅನಿರ್ದಿಷ್ಟಾವಧಿಗೆ ಮುಂದೂಡಲಾಗಿದೆ. ೧೯ ದಿನಗಳ ಚಳಿಗಾಲದ ಈ ಅಧಿವೇಶನ ಇಂದು ಮುಕ್ತಾಯಗೊಂಡಿದೆ. ತಮ್ಮ ಸಮಾರೋಪ ಭಾಷಣದಲ್ಲಿ, ಲೋಕಸಭಾಧ್ಯಕ್ಷ ಓಂ ಬಿರ್ಲಾ, ಸದನದ ಉತ್ಪಾದಕತೆ ಸುಮಾರು ಶೇಕಡಾ ೧೧೧ ರಷ್ಟಿದೆ. ಒಟ್ಟು ೧೫ ಕಲಾಪಗಳು ನಡೆದಿವೆ. ಸುಗಮ ಕಲಾಪಕ್ಕೆ ಸಹಕರಿಸಿದ್ದಕ್ಕಾಗಿ ಅವರು ಎಲ್ಲಾ ಸದಸ್ಯರಿಗೆ ಧನ್ಯವಾದ ಸಲ್ಲಿಸಿದರು. ತಮ್ಮ ಸಮಾರೋಪ ಭಾಷಣದಲ್ಲಿ ರಾಜ್ಯಸಭಾ ಸಭಾಪತಿ ಸಿ.ಪಿ.ರಾಧಾಕೃಷ್ಣನ್, ಸದನವು ಸುಮಾರು ೯೨ ಗಂಟೆಗಳ ಕಾಲ ಕಾರ್ಯನಿರ್ವಹಿಸಿತು ಮತ್ತು ಶೇಕಡಾ ೧೨೧ ರಷ್ಟು ಉತ್ಪಾದಕತೆ ದಾಖಲಿಸಿದೆ ಎಂದು ತಿಳಿಸಿದರು. ಅಧಿವೇಶನದಲ್ಲಿ ೫೯ ಖಾಸಗಿ ಮಸೂದೆಗಳನ್ನು ಪರಿಚಯಿಸಲಾಗಿದೆ. ಅಧಿವೇಶನದಲ್ಲಿ ಉತ್ತಮ ಗುಣಮಟ್ಟದ ಹಾಗೂ ಐತಿಹಾಸಿಕ ಮತ್ತು ಪ್ರಜಾಪ್ರಭುತ್ವದ ಮಹತ್ವದ ವಿಷಯಗಳ ಕುರಿತು ಚರ್ಚೆಗಳು ನಡೆದಿವೆ ಎಂದು ಅವರು ಹೇಳಿದರು. ರಾಷ್ಟ್ರೀಯ ಗೀತೆ ವಂದೇ ಮಾತರಂನ ೧೫೦ ನೇ ವಾರ್ಷಿಕೋತ್ಸವದಂದು ಸದನವು ವಿಶೇಷ ಚರ್ಚೆಯನ್ನು ನಡೆಸಿತು. ಇದರಲ್ಲಿ ೮೨ ಸದಸ್ಯರು ಭಾಗವಹಿಸಿದ್ದರು. ಸದನವು ಚುನಾವಣಾ ಸುಧಾರಣೆಗಳ ಕುರಿತು ಚರ್ಚೆಯನ್ನು ನಡೆಸಿತು. ಇದರಲ್ಲಿ ೫೭ ಸದಸ್ಯರು, ದೇಶದ

ಪ್ರಜಾಪ್ರಭುತ್ವ ಪ್ರಕ್ರಿಯೆಯನ್ನು ಬಲಪಡಿಸುವ ಬಗ್ಗೆ ತಮ್ಮ ಅಮೂಲ್ಯವಾದ ಒಳನೋಟಗಳನ್ನು ಹಂಚಿಕೊಂಡರು ಎಂದು ಸಿ.ಪಿ.ರಾಧಾಕೃಷ್ಣನ್ ತಿಳಿಸಿದರು.

********

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಹೈದರಾಬಾದ್‌ನಲ್ಲಿಂದು ರಾಜ್ಯ ಸಾರ್ವಜನಿಕ ಸೇವಾ ಆಯೋಗಗಳ ಅಧ್ಯಕ್ಷರ ಎರಡು ದಿನಗಳ ರಾಷ್ಟ್ರೀಯ ಸಮ್ಮೇಳನವನ್ನು ಉದ್ಘಾಟಿಸಿದರು. ದೇಶಾದ್ಯಂತ ಇರುವ ರಾಜ್ಯ ಸಾರ್ವಜನಿಕ ಸೇವಾ ಆಯೋಗಗಳ ಅಧ್ಯಕ್ಷರು ಮತ್ತು ಹಿರಿಯ ಅಧಿಕಾರಿಗಳು ಈ ಸಮ್ಮೇಳನದಲ್ಲಿ ಭಾಗವಹಿಸಿದ್ದಾರೆ. ಈ ಸಂದರ್ಭದಲ್ಲಿ ತೆಲಂಗಾಣ ರಾಜ್ಯಪಾಲ ಜಿಷ್ಣು ದೇವ್ ವರ್ಮಾ, ಮುಖ್ಯಮಂತ್ರಿ ರೇವಂತ್ ರೆಡ್ಡಿ, ಲೋಕ ಸೇವಾ ಆಯೋಗದ ಅಧ್ಯಕ್ಷ ಅಜಯ್ ಕುಮಾರ್ ಉಪಸ್ಥಿತರಿದ್ದಾರೆ.

********

ನವದೆಹಲಿಯಲ್ಲಿ ಇಂದು ನಡೆಯಲಿರುವ ಎರಡನೇ ವಿಶ್ವ ಆರೋಗ್ಯ ಸಂಸ್ಥೆಯ ಸಾಂಪ್ರದಾಯಿಕ ಔಷಧ ಜಾಗತಿಕ ಶೃಂಗಸಭೆಯ ಸಮಾರೋಪ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಲಿದ್ದಾರೆ. ಈ ಸಂದರ್ಭದಲ್ಲಿ, ಆಯುಷ್ ವಲಯಕ್ಕೆ ಮಾಸ್ಟರ್ ಡಿಜಿಟಲ್ ಪೋರ್ಟಲ್ ಆದ ಮೈ ಆಯುಷ್ ಇಂಟಿಗ್ರೇಟೆಡ್ ಸರ್ವೀಸಸ್ ಪೋರ್ಟಲ್ ಸೇರಿದಂತೆ ಹಲವಾರು ಆಯುಷ್ ಉಪಕ್ರಮಗಳಿಗೆ ಚಾಲನೆ ನೀಡಲಿದ್ದಾರೆ. ಆಯುಷ್ ಉತ್ಪನ್ನಗಳು ಮತ್ತು ಸೇವೆಗಳ ಗುಣಮಟ್ಟಕ್ಕೆ ಜಾಗತಿಕ ಮಾನದಂಡವಾಗಿ ಕಲ್ಪಿಸಲಾಗಿರುವ ಆಯುಷ್ ಮಾರ್ಕ್ ಅನ್ನು ಅವರು ಅನಾವರಣಗೊಳಿಸಲಿದ್ದಾರೆ. ಕಾರ್ಯಕ್ರಮದ ಸಂದರ್ಭದಲ್ಲಿ, ಪ್ರಧಾನಿ ಮೋದಿ ಅವರು ಯೋಗದಲ್ಲಿ ತರಬೇತಿಯ ಕುರಿತು ವಿಶ್ವ ಆರೋಗ್ಯ ಸಂಸ್ಥೆಯ ತಾಂತ್ರಿಕ ವರದಿ ಮತ್ತು From Roots to Global Reach: 11 Years of Transformation in AYUSH ಪುಸ್ತಕವನ್ನು ಬಿಡುಗಡೆ ಮಾಡಲಿದ್ದಾರೆ. ಭಾರತದ ಸಾಂಪ್ರದಾಯಿಕ ಔಷಧೀಯ ಪರಂಪರೆಯ ಅಶ್ವಗಂಧದ ಕುರಿತು ಸ್ಮರಣಾರ್ಥ ಅಂಚೆ ಚೀಟಿಯನ್ನು ಅವರು ಬಿಡುಗಡೆ ಮಾಡಲಿದ್ದಾರೆ. ೨೦೨೧-೨೦೨೫ ಅವಧಿಯಲ್ಲಿ ಯೋಗದ ಪ್ರಚಾರ ಮತ್ತು ಅಭಿವೃದ್ಧಿಗೆ ಅತ್ಯುತ್ತಮ ಕೊಡುಗೆಗಾಗಿ ಪ್ರಧಾನ ಮಂತ್ರಿಗಳ ಪ್ರಶಸ್ತಿ ಪಡೆದವರನ್ನು ಅವರು ಸನ್ಮಾನಿಸಲಿದ್ದಾರೆ. ಭಾರತ ಮತ್ತು ಪ್ರಪಂಚದಾದ್ಯಂತದ ಸಾಂಪ್ರದಾಯಿಕ ಔಷಧ ಜ್ಞಾನ ವ್ಯವಸ್ಥೆಗಳ ವೈವಿಧ್ಯತೆ, ಆಳ ಮತ್ತು ಸಮಕಾಲೀನ ಪ್ರಸ್ತುತತೆಯನ್ನು ಪ್ರದರ್ಶಿಸುವ 'ಸಾಂಪ್ರದಾಯಿಕ ಔಷಧ ಡಿಸ್ಕವರಿ ಸ್ಪೇಸ್'ಗೆ ಇದೇ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಭೇಟಿ ನೀಡಲಿದ್ದಾರೆ.

********

ಇತ್ತೀಚೆಗೆ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಭಾರತವನ್ನು ಪ್ರತಿನಿಧಿಸಿದ್ದ ವಿವಿಧ ಸಂಸದೀಯ ನಿಯೋಗಗಳ ಸದಸ್ಯರೊಂದಿಗೆ ಇಂದು ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಸಂವಾದ ನಡೆಸಿದರು. ವಿಶ್ವ ವೇದಿಕೆಯಲ್ಲಿ ಭಾರತದ ನಿಲುವನ್ನು ವ್ಯಕ್ತಪಡಿಸಿದ್ದಕ್ಕಾಗಿ ಸದಸ್ಯರನ್ನು ಡಾ.ಎಸ್.ಜೈಶಂಕರ್ ಶ್ಲಾಘಿಸಿದರು. ಇದೇ ವೇಳೆ, ಸದಸ್ಯರು ತಮ್ಮ ಅನುಭವಗಳನ್ನು ಹಂಚಿಕೊಂಡರು.

********

ಬ್ರಿಟೀಷರ ವಿರುದ್ಧ ಹೋರಾಡಿ ಹುತಾತ್ಮರಾದ ಪಂಡಿತ್ ರಾಮ್ ಪ್ರಸಾದ್ ಬಿಸ್ಮಿಲ್, ಅಶ್ಫಾಕ್ ಉಲ್ಲಾ ಖಾನ್ ಮತ್ತು ರೋಷನ್ ಸಿಂಗ್ ಅವರ ಪುಣ್ಯತಿಥಿಯಂದು ಅವರಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಗೌರವ ನಮನ ಸಲ್ಲಿಸಿದ್ದಾರೆ. ಈ ಹುತಾತ್ಮರು ಕಾಕೋರಿ ರೈಲು ಕಾರ್ಯಾಚರಣೆ ಮೂಲಕ ಸ್ವತಂತ್ರ್ಯ ಹೋರಾಟಕ್ಕೆ ಹೊಸ ಶಕ್ತಿ ತುಂಬಿದ್ದರು ಹಾಗೂ ಬ್ರಿಟೀಷ್ ಆಡಳಿತದ ಅಡಿಪಾಯವನ್ನು ಅಲುಗಾಡಿಸಿದ್ದರು. ಈ ಕ್ರಾಂತಿಕಾರಿಗಳನ್ನು ದೇಶ ಎಂದಿಗೂ ಮರೆಯಲು ಸಾಧ್ಯವಿಲ್ಲ ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವ ಅಮಿತ್ ಶಾ ಹೇಳಿದ್ದಾರೆ.

********

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಕೈಗೊಂಡಿರುವ ಗುಜರಾತ್‌ನ ಎಲ್ಲಾ ವಿಧಾನಸಭಾ ಕ್ಷೇತ್ರಗಳ ಕರಡು ಮತದಾರರ ಪಟ್ಟಿಯನ್ನು ಚುನಾವಣಾ ಆಯೋಗ ಇಂದು ಪ್ರಕಟಿಸಲಿದೆ.  ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಪಾರದರ್ಶಕತೆಯನ್ನು ಖಚಿತಪಡಿಸಿಕೊಳ್ಳಲು ಜಿಲ್ಲಾ ಚುನಾವಣಾ ಅಧಿಕಾರಿಗಳು, ಕರಡು ಮತದಾರರ ಪಟ್ಟಿಯನ್ನು ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಹಸ್ತಾಂತರಿಸಲಿದ್ದಾರೆ. ಈ ಕುರಿತು ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ೨೦೨೬ ರ ಜನವರಿ ೧೮ ರವರೆಗೆ ಅವಕಾಶ ಕಲ್ಪಿಸಲಾಗಿದೆ.

********

ನಾಸಾದ ೨೦೨೫ ರ ಅಂತಾರಾಷ್ಟ್ರೀಯ ಬಾಹ್ಯಾಕಾಶ ಅಪ್ಲಿಕೇಶನ್‌ಗಳ ಜಾಗತಿಕ ಸ್ಪರ್ಧೆಯಲ್ಲಿ ಚೆನ್ನೈ ಮೂಲದ ಭಾರತೀಯ ತಂಡ 'ಫೋಟೊನಿಕ್ಸ್ ಒಡಿಸ್ಸಿ' ವಿಜೇತರಾಗಿ ಹೊರಹೊಮ್ಮಿದೆ. ದೂರದ ಪ್ರದೇಶಗಳಲ್ಲಿ ಬ್ರಾಡ್‌ಬ್ಯಾಂಡ್ ಪ್ರವೇಶವನ್ನು ವಿಸ್ತರಿಸಲು, ಹಂತ ಹಂತದ ಉಪಗ್ರಹ ಇಂಟರ್ನೆಟ್ ಮೂಲಸೌಕರ್ಯವನ್ನು ಈ ತಂಡ ಪ್ರಸ್ತಾಪಿಸಿತು. ಈ ಯೋಜನೆಯು ನೆಲದ ಅವಲಂಬನೆಯನ್ನು ಕಡಿಮೆ ಮಾಡುವುದು ಮತ್ತು ಪ್ರಸ್ತುತ ಬ್ರಾಡ್‌ಬ್ಯಾಂಡ್ ಸಂಪರ್ಕವಿಲ್ಲದ ಭಾರತದ ೬೦೦ ದಶಲಕ್ಷಕ್ಕಿಂತಲೂ ಹೆಚ್ಚು ಜನರನ್ನು ಸಂಪರ್ಕಿಸಲು ಸಹಾಯ ಮಾಡುವ

ಗುರಿಯನ್ನು ಹೊಂದಿದೆ. ವಿಜೇತ ತಂಡದಲ್ಲಿ ಮನೀಶ್ ಡಿ., ಪ್ರಶಾಂತ್ ಜಿ., ರಾಜಲಿಂಗಂ ಎನ್., ರಾಶಿ ಎಂ, ಶಕ್ತಿ ಆರ್ ಮತ್ತು ಎಂ.ಕೆ. ಇದ್ದಾರೆ.

********

ಇಂಕಿಲಾಬ್ ಮಂಚ್ ಸಂಚಾಲಕ ಷರೀಫ್ ಉಸ್ಮಾನ್ ಹಾದಿ ಸಾವಿನ ಬೆನ್ನಲ್ಲೇ, ಢಾಕಾದಲ್ಲಿಂದು ಗಲಭೆ ಭುಗಿಲೆದ್ದಿದೆ. ಪ್ರತಿಭಟನಾಕಾರರು, ಪ್ರಸಿದ್ಧ ಬಂಗಾಳಿ ಸಾಂಸ್ಕೃತಿಕ ಸಂಘಟನೆ ಛಾಯನೌತ್ ಭವನದ ಆವರಣವನ್ನು ಧ್ವಂಸಗೊಳಿಸಿ, ಬೆಂಕಿ ಹಚ್ಚಿದ್ದಾರೆ. ಕಿಡಿಗೇಡಿಗಳ ಗುಂಪೊಂದು ಬಲವಂತವಾಗಿ ಭವನ ಪ್ರವೇಶಿಸಿ, ಪೀಠೋಪಕರಣಗಳು ಮತ್ತು ಸಂಗೀತ ಉಪಕರಣಗಳನ್ನು ಧ್ವಂಸಗೊಳಿಸಿದ್ದಾರೆ. ಕೆಲವು ವಸ್ತುಗಳಿಗೆ ಬೆಂಕಿ ಹಚ್ಚಿದ್ದಾರೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ. ಸ್ಥಳಕ್ಕೆ ಅಗ್ನಿಶಾಮಕ ಸಿಬ್ಬಂದಿ ಆಗಮಿಸಿ ಬೆಂಕಿಯನ್ನು ನಂದಿಸಿದ್ದಾರೆ. ಗುಂಪನ್ನು ಚದುರಿಸಲು ಪೊಲೀಸರು ಹರಸಹಾಸ ಪಡುತ್ತಿದ್ದಾರೆ. ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಸ್ಥಳದಲ್ಲಿ ಬಾಂಗ್ಲಾದೇಶ ಸೇನೆ ಮತ್ತು ಪೊಲೀಸರನ್ನು ನಿಯೋಜಿಸಲಾಗಿದೆ.

********

ಅಮೆರಿಕದ ಉತ್ತರ ಕರೊಲಿನಾ ರಾಜ್ಯದ ಸ್ಟೇಟ್ಸ್‌ವಿಲ್ಲೆಯಲ್ಲಿರುವ ಪ್ರಾದೇಶಿಕ ವಿಮಾನ ನಿಲ್ದಾಣದಲ್ಲಿ ಸಣ್ಣ ವಿಮಾನವೊಂದು ಭೂಸ್ಪರ್ಶದ ವೇಳೆ ಅಪಘಾತಕ್ಕೀಡಾಗಿ ಇಬ್ಬರು ಮಕ್ಕಳು ಸೇರಿದಂತೆ ಒಟ್ಟು ಏಳು ಮಂದಿ ಮೃತಪಟ್ಟಿದ್ದಾರೆ. ಈ ವಿಮಾನ ಖಾಸಗಿ ಕಂಪನಿಯ ಒಡೆತನದಲ್ಲಿದೆ. ಅಪಘಾತದಲ್ಲಿ ಮೃತಪಟ್ಟವರಲ್ಲಿ ನಾಸ್ಕರ್ ರೇಸಿಂಗ್ ಕಾರು ಚಾಲಕ ಗ್ರೇಗ್ ಬಿಫೆಲ್, ಅವರ ಪತ್ನಿ ಮತ್ತು ಇಬ್ಬರು ಮಕ್ಕಳು ಸೇರಿದ್ದಾರೆ. ಮುಂದಿನ ಸೂಚನೆವರೆಗೆ ವಿಮಾನ ನಿಲ್ದಾಣವನ್ನು ಮುಚ್ಚಲಾಗಿದೆ. ಘಟನೆ ಕುರಿತು ತನಿಖೆ ನಡೆಯುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

********

ಪುರುಷರ ಕ್ರಿಕೆಟ್‌ನಲ್ಲಿ, ಭಾರತ ಮತ್ತು ದಕ್ಷಿಣ ಆಫ್ರಿಕಾ ನಡುವಿನ ಐದನೇ ಮತ್ತು ಅಂತಿಮ ಟಿ-೨೦ ಅಂತಾರಾಷ್ಟ್ರೀಯ ಪಂದ್ಯ ಇಂದು ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯಲಿದೆ. ಪಂದ್ಯ ಸಂಜೆ ೭ ಗಂಟೆಗೆ ಆರಂಭವಾಗಲಿದೆ.ಸೂರ್ಯಕುಮಾರ್ ಯಾದವ್ ನೇತೃತ್ವದ ಭಾರತ ತಂಡ, ಪ್ರಸ್ತುತ ೨-೧ ಮುನ್ನಡೆ ಸಾಧಿಸಿದ್ದು, ಸರಣಿ ಕೈವಶ ಮಾಡಿಕೊಳ್ಳುವ ತವಕದಲ್ಲಿದೆ.

********

ದುಬೈನ ಐಸಿಸಿ ಅಕಾಡೆಮಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ೧೯ ವರ್ಷದೊಳಗಿನ ಪುರುಷರ ಎಸಿಸಿ ಏಷ್ಯಾಕಪ್ -೨೦೨೫ ರ ಮೊದಲನೇ ಸೆಮಿಫೈನಲ್‌ನಲ್ಲಿ ಭಾರತ ಮತ್ತು ಶ್ರೀಲಂಕಾ ತಂಡಗಳು ಮುಖಾಮುಖಿಯಾಗಿವೆ. ಮಳೆಯ ಕಾರಣ ಪಂದ್ಯ ತಡವಾಗಿದೆ.

********